ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 229 ಗ್ರಾಪಂಅ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:21-06-2019.

## ಸುತ್ತೋಲೆ

ವಿಷಯ: 2019-20ನೇ ಸಾಲಿನ ಪ್ರಧಾನ ಮಂತ್ರಿ ಕಿಸಾನ್ (Pradhan Mantri KIsan Samman Nidhi) ಯೋಜನೆ ಅನುಷ್ಠಾನ ಕುರಿತು.

ಉಲ್ಲೇಖ:
1. ಸರ್ಕಾರದ ಅಧಿಸೂಚನೆ ಸಂ:ಕೃಇ 09/ಕೃಉಇ 2019 ದಿನಾಂಕ: 15-02-2019.
2. ಸರ್ಕಾರದ ಪತ್ರ ಸಂಖ್ಯೆ:ಗ್ರಾಅಪ 229 ಗ್ರಾಪಂಅ 2019 ದಿನಾಂಕ:14-03-2019.
3. ದಿನಾಂಕ:13/14.06.2019 ರ ಜಿಲ್ಲಾಧಿಕಾರಿಗಳು ಮತ್ತು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಸಭೆಯಲ್ಲಿ ಚರ್ಚಿಸಿದಂತೆ.
4. ದಿನಾಂಕ:17-06-2019 ರ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ವಿಡಿಯೋ ಸಂವಾದದಲ್ಲಿ ನೀಡಿರುವ ಸೂಚನೆ ಅನುಸಾರ.

*******

ಕೇಂದ್ರ ಸರ್ಕಾರದ ಪತ್ರದ ಸಂಖ್ಯೆ:1-1/2019- Credit, 1 ದಿನಾಂಕ:01-02-2019 ರ ಪತ್ರದನ್ವಯ ರಾಜ್ಯದಲ್ಲಿ 2018-19ನೇ ಸಾಲಿನಿಂದ ಪ್ರಧಾನ ಮಂತ್ರಿ ಕಿಸಾನ್ (Pradhan Mantri KIsan Samman Nidhi PM-KISAN) ಯೋಜನೆಯನ್ನು ಕೇಂದ್ರ ಸರ್ಕಾರದ ಶೇಕಡ 100 ರ ಅನುದಾನದೊಂದಿಗೆ ಅನುಷ್ಠಾನಗೊಳಿಸಬೇಕಾಗಿರುತ್ತದೆ. ಕೇಂದ್ರ ಸರ್ಕಾರದ ಪತ್ರ ದಿನಾಂಕ: 01-02-2019 ರಲ್ಲಿ ನೀಡಿರುವ ಮಾರ್ಗಸೂಚಿಯಲ್ಲಿನ ಕೆಲವೊಂದು ಅಂಶಗಳನ್ನು ಬದಲಾವಣೆ ಮಾಡಿ ದಿನಾಂಕ:07-06-2019 ಸುತ್ತೋಲೆಯಲ್ಲಿ ಸದರಿ ಯೋಜನೆಯನ್ನುಭೂ ಹಿಡುವಳಿ ಹೊಂದಿರುವ ಎಲ್ಲಾ ರೈತರಿಗೂ ವಿಸ್ತರಿಸಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ತಿಳಿಸಲಾಗಿರುತ್ತದೆ. ದಿನಾಂಕ: 17-06-2019 ರಂದು ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಹಾಗೂ ಸಂಬಂಧಪಟ್ಟಂತಹ ಜಿಲ್ಲೆಗಳ ವಿವಿಧ ಇಲಾಖೆಗಳ ಮುಖ್ಯಸ್ಥರೊಂದಿಗೆ ನಡೆಸಿದ ವಿಡಿಯೋ ಸಂವಾದದಲ್ಲಿ ಈ ಪ್ರಮುಖ ಬದಲಾವಣೆಗಳ ಬಗ್ಗೆ ಮಾಹಿತಿಯನ್ನು ಸಹ ನೀಡಲಾಗಿರುತ್ತದೆ.

ಅದರಂತೆ, ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಇಲಾಖೆ ನಿಗಧಿಪಡಿಸಿರುವ / ಪರಿಷ್ಕೃತಗೊಂಡಿರುವ ಅನುಬಂಧವನ್ನು ರೈತರಿಗೆ ನೀಡಿ ಈ ಬಗ್ಗೆ ರೈತರಿಂದ ಮಾಹಿತಿಯನ್ನು ಅನುಬಂಧದಲ್ಲಿ ಭರ್ತಿ ಮಾಡಿಸಿ, ಅನುಬಂಧವನ್ನು ರೈತರಿಂದ ಪಡೆದುಕೊಂಡು ತದನಂತರ ಅದನ್ನು ಪರಿಶೀಲಿಸಿ FRUITS PM-KISAN Portal ನಲ್ಲಿ Upload ಮಾಡಲು ಈಗಾಗಲೇ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ (PDO) User ID ಹಾಗೂ Password ಗಳನ್ನು ನೀಡಲಾಗಿದ್ದು, ಇದರ ಮುಖೇನ ದಿನಾಂಕ:30-06-2019 ರ ಒಳಗೆ ರೈತರ ಮಾಹಿತಿಯನ್ನು Upload ಮಾಡಲು ಸಮರೋಪಾದಿಯಲ್ಲಿ ಸೂಕ್ತ ಕ್ರಮಕೈಗೊಳ್ಳಲು ಕಟ್ಟುನಿಟ್ಟಾಗಿ ಸೂಚಿಸಿದೆ.

ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು (PDO) ಕೂಡಲೇ ನಿಗಧಿತ ನಮೂನೆಗಳನ್ನು ರೈತರಿಗೆ ನೀಡಿ ಮೇಲಿನಂತೆ ಕ್ರಮ ವಹಿಸಲು ತಿಳಿಸುತ್ತಾ, ಈ ಬಗ್ಗೆ ಉದಾಸೀನತೆ ತೋರಿಸುವ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಮೇಲೆ ಶಿಸ್ತಿನ ಕ್ರಮ ಕೈಗೊಳ್ಳಲಾಗುವುದೆಂದೂ ಹಾಗೂ ಪ್ರತಿ ದಿನ ಕೈಗೊಂಡ ಕ್ರಮಗಳ ಬಗ್ಗೆ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳಿಗೆ ಮಾಹಿತಿ ನೀಡಲು ತಿಳಿಸಿದೆ.

(ಉಮಾ ಮಹದೇವನ್)
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

<u>ಗೆ:</u>

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,
2) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
3) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

<u>ಪ್ರತಿ:</u>

1) ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು.
3) ಸರ್ಕಾರದ ಕಾರ್ಯದರ್ಶಿಗಳು, ಕೃಷಿ ಇಲಾಖೆ. ಬಹುಮಹಡಿ ಕಟ್ಟಡ, ಬೆಂಗಳೂರು.
4) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
5) ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ.
6) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
7) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.